**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೊನ್ನಾವರ**

**ಸಿ.ಸಿ. ನಂ. 76/2020**

**ಚಾ.ಸಾಃ 4, ಫ್ರಾ.ಸಾಃ 13**

| | |
|---|---|
| ಸಾಕ್ಷಿದಾರನ ಹೆಸರು | ನಿತಿನ್ ನಾಯ್ಕ |
| ತಂದೆಯ ಹೆಸರು | ನೀಲಕಂಠ ನಾಯ್ಕ |
| ವಯಸ್ಸು | 32 ವರ್ಷಗಳು |
| ಉದ್ಯೋಗ | ಚಾಲಕ |
| ವಾಸ್ತವ್ಯ | ದುರ್ಗಾಕೇರಿ, ಬಾಂದೇಗದ್ದೆ, ಹೊನ್ನಾವರ |

**ಸಾಕ್ಷಿಯನ್ನು ದಿನಾಂಕಃ 06-12-2025 ರಂದು ಕರೆಸಿ ಪ್ರಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎಪಿಪಿಯವರಿಂದ,**

ನ್ಯಾಯಾಲಯದ ಮುಂದಿರುವ ಆರೋಪಿಗಳನ್ನು ನೋಡಿರುತ್ತೇನೆ.

ಈಗ್ಗೆ 6 ವರ್ಷಗಳ ಹಿಂದೆ ಪೋಲೀಸರು ನನ್ನನ್ನು ಆರೋಪಿತರೊಡನೆ ಚಂದಾವರದ ಹತ್ತಿರ ಕರೆದುಕೊಂಡು ಹೋಗಿ ಯಾವುದೋ ಒಂದು ಕಾರ್ ಹತ್ತಿರ ನನ್ನನ್ನು ನಿಲ್ಲಿಸಿ ಫೋಟೋ ತೆಗೆಸಿ ಒಂದು ಪಂಚನಾಮೆಗೆ ನನ್ನ ಸಹಿ ತೆಗೆದುಕೊಂಡಿರುತ್ತಾರೆ. ಸದರಿ ಪಂಚನಾಮೆಯನ್ನು ನೋಡುತ್ತಿದ್ದು ಅದನ್ನು ನಿಪಿ-14 ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ-14(ಬಿ) ಎಂದು ಗುರುತಿಸಲಾಯಿತು. ಆ ಕಾಲಕ್ಕೆ ತೆಗೆದ ಫೋಟೋಗಳನ್ನು ಈಗ ನೋಡುತ್ತಿದ್ದು ನಿಪಿ-15 ರಿಂದ 18 ಎಂದು ಗುರುತಿಸಲಾಗಿದೆ.

ಈಗ್ಗೆ 5-6 ವರ್ಷಗಳ ಹಿಂದೆ ಪೋಲೀಸರು ನನ್ನನ್ನು ಠಾಣೆಗೆ ಕರೆಸಿ ಪೋಲೀಸರು ಒಬ್ಬ ವ್ಯಕ್ತಿಗೆ ಒಂದು ಕವರಿನಲ್ಲಿ ಏನೋ ಕೊಡುತ್ತಾ ಒಂದು ಫೋಟೋ ತೆಗೆಸಿರುತ್ತಾರೆ. ಸದರಿ ಫೋಟೋವನ್ನು ಈಗ ನೋಡುತ್ತಿದ್ದು ನಿಪಿ-20 ಎಂದು ಗುರುತಿಸಲಾಗಿದೆ.

ನಂತರ ಪೋಲೀಸರು ನನ್ನನ್ನು ಕುಮಟಾದ ಮಣಪ್ಪುರಂ ಕಚೇರಿಗೆ ಕರೆದುಕೊಂಡು ಹೋಗಿದ್ದರು. ಅಲ್ಲಿದ್ದವರು ಪೋಲೀಸರಿಗೆ ಒಂದು ಕವರನ್ನು ಕೊಟ್ಟರು. ಆ ಕಾಲಕ್ಕೆ ಪೋಲಿಸರು ಒದು ಫೋಟೋ ತೆಗೆದು ಒಂದು ಪಂಚನಾಮೆಗೆ ನನ್ನ ಸಹಿ ತೆಗೆದುಕೊಂಡಿರುತ್ತಾರೆ. ಸದರಿ ಫೋಟೋಗಳನ್ನು ನೋಡುತ್ತಿದ್ದು ನಿಪಿ-22 ಮತ್ತು 24 ಎಂದು ಗುರುತಿಸಿದ್ದು ಪಂಚನಾಮೆಗಳನ್ನು ನಿಪಿ-21 ಮತ್ತು 23 ಎಂದು ಗುರತಿಸಲಾಗಿದೆ. ಅದರಲ್ಲಿರುವ ಸಾಕ್ಷಿ ಸಹಿಗಳನ್ನು ನಿಪಿ-21(ಬಿ) ಮತ್ತು 23(ಬಿ) ಎಂದು ಗುರುತಿಸಲಾಯಿತು.

ಪಂಚನಾಮೆಯಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿಲ್ಲ. ಪೋಲಿಸರು ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿಲ್ಲ.

**(ಈ ಸಂದರ್ಭದಲ್ಲಿ ಸ.ಸ.ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀಸವಾಲಿಗೆ ಒಳಪಡಿಸಲು ಅನುಮತಿಯನ್ನು ಕೋರಿರುತ್ತಾರೆ. ಅನುಮತಿಸಲಾಯಿತು.)**

**ಪಾಟೀಸವಾಲುಃ ಸಹಾಯಕ ಸರಕಾರಿ ಅಭಿಯೋಜಕರಿಂದ,**

ದಿನಾಂಕ 31-07-2020 ರಂದು ಪೋಲೀಸರು ಈ ದಿನ ನ್ಯಾಯಾಲಯದ ಮುಂದೆ ಇರುವ ಆರೋಪಿತರನ್ನು ಹಿಡಿದು ಠಾಣೆಗೆ ತಂದಿದ್ದು ಅವರ ಮಾಹಿತಿಯಂತೆ ಕೃತ್ಯಕ್ಕೆ ಬಳಸಿದ್ದ ಕಾರು ಮತ್ತು ಎರಡು ರಾಡಗಳನ್ನು ಹಾಗೂ ಅವರು ತಮ್ಮ ಮನೆಯಲ್ಲಿ ಇಟ್ಟಿದ್ದ ಬಂಗಾರದ ಮೂಗುತಿಯನ್ನು ತೋರಿಸುವುದಾಗಿ ಒಪ್ಪಿಕೊಂಡಿದ್ದು ಅದರಂತೆ ಅವುಗಳನ್ನು ಅಮಾನತ್ತುಪಡಿಸಿಕೊಳ್ಳಲು ಪೋಲೀಸರು ನನ್ನನ್ನು ಹಾಗೂ ಚಾಸಾ-5 ರವರನ್ನು ಪಂಚರಾಗಿ ಬರಬೇಕು ಎಂದು ಕರೆದಿದ್ದು ಅದರಂತೆ ನಾವು ಒಪ್ಪಿ ಪೋಲೀಸರ ಜೊತೆ ಹೋದಾಗ ಆರೋಪಿತರು ತಮ್ಮ ಮನೆಗೆ ಕರೆದುಕೊಂಡು ಹೋಗಿ ಮನೆಯ ಒಳಗೆ ಒಂದು ಕಪಾಟಿನಲ್ಲಿ ಇಟ್ಟಿದ್ದ ಒಂದು ಬಂಗಾರದ ಮೂಗುತಿಯನ್ನು ಪೋಲೀಸರಿಗೆ ಹಾಜರುಪಡಿಸಿದ್ದು ಆ ಕಾಲಕ್ಕೆ ಪೋಲೀಸರು ನಿಪಿ-8 ರಂತೆ ಫೋಟೋ ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ನಂತರ ಆರೋಪಿತರು ತಮ್ಮ ವಾಸದ ಮನೆಯ ಮುಂದೆ ನಿಲ್ಲಿಸಿದ್ದ ಒಂದು ಕಾರನ್ನು ತೋರಿಸಿ ಸದರಿ ಕಾರನ್ನು ಕೃತ್ಯಕ್ಕೆ ಬಳಸಿರುವುದಾಗಿ ತೋರಿಸಿದ್ದು, ಸದರಿ ಕಾರಿನಲ್ಲಿದ್ದ 2 ಕಬ್ಬಿಣದ ರಾಡನ್ನು ತೋರಿಸಿದ್ದು ಪೋಲೀಸರು ಅವುಗಳನ್ನು ನಿಪಿ-14 ರಡಿ ಪಂಚನಾಮೆ ಮಾಡಿ ನಿಪಿ-6 ರಿಂದ 9 ರಂತೆ ಫೋಟೋ ತೆಗೆಸಿರುತ್ತಾರೆ ಎಂದರೆ ಸರಿಯಲ್ಲ.

ದಿನಾಂಕ 01-08-2020 ರಂದು ಪೋಲಿಸರು ನನ್ನನ್ನು ಠಾಣೆಗೆ ಕರೆಸಿದ್ದು ಠಾಣಾ ಆವರಣದಲ್ಲಿ ಆರೋಪಿತರು ಕೃತ್ಯಕ್ಕೆ ಬಳಸಿದ್ದ ಬೈಕನ್ನು ನಿಪಿ-19 ರ ಪಂಚನಾಮೆ ಅಡಿಯಲ್ಲಿ ಅಮಾನತ್ತುಪಡಿಸಿಕೊಂಡು ನನ್ನ ಸಹಿ ತೆಗೆದುಕೊಂಡು ನಿಪಿ-20 ರಂತೆ ಫೋಟೋ ತೆಗೆದಿರುತ್ತಾರೆ ಎಂದರೆ ಸರಿಯಲ್ಲ.

ಅದೇ ದಿನ ಪೋಲಿಸರು ನನ್ನನ್ನು ಕುಮಟಾದ ಮಣಪ್ಪುರಂ ಫೈನಾನ್ಸಗೆ ಕರೆದುಕೊಂಡು ಹೋಗಿದ್ದು ಅಲ್ಲಿ ಮ್ಯಾನೇಜರವರು ಆರೋಪಿತರು ಗಿರವಿ ಇಟ್ಟಿದ್ದ ಬಂಗಾರಗಳನ್ನು ನನ್ನ ಸಮಕ್ಷಮ ಹಾಜರುಪಡಿಸಿದ್ದು ಪೋಲೀಸರು ಅವುಗಳನ್ನು ನಿಪಿ-21 ರ ಪಂಚನಾಮೆ ಅಡಿಯಲ್ಲಿ ಅಮಾನತ್ತುಪಡಿಸಿಕೊಂಡು ನನ್ನ ಸಹಿ ತೆಗೆದುಕೊಂಡು ನಿಪಿ-22 ರಂತೆ ಫೋಟೋ ತೆಗೆದಿರುತ್ತಾರೆ ಎಂದರೆ ಸರಿಯಲ್ಲ.

ಅದೇ ದಿನ ಪೋಲಿಸರು ನನ್ನನ್ನು ಕುಮಟಾದ ಮತ್ತೊಂದು ಮಣಪ್ಪುರಂ ಫೈನಾನ್ಸಗೆ ಕರೆದುಕೊಂಡು ಹೋಗಿದ್ದು ಅಲ್ಲಿ ಮ್ಯಾನೇಜರವರು ಆರೋಪಿತರು ಗಿರವಿ ಇಟ್ಟಿದ್ದ ಬಂಗಾರಗಳನ್ನು ನನ್ನ ಸಮಕ್ಷಮ ಹಾಜರುಪಡಿಸಿದ್ದು ಪೋಲೀಸರು ಅವುಗಳನ್ನು ನಿಪಿ-23 ರ ಪಂಚನಾಮೆ ಅಡಿಯಲ್ಲಿ ಅಮಾನತ್ತುಪಡಿಸಿಕೊಂಡು ನನ್ನ ಸಹಿ ತೆಗೆದುಕೊಂಡು ನಿಪಿ-24 ರಂತೆ ಫೋಟೋ ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ಜಪ್ತು ಪಂಚನಾಮೆಯ ವಿಚಾರಗಳು ಗೊತ್ತಿದ್ದರೂ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿಗಳ ಪರ ವಕೀಲರಾದ ಶ್ರೀ ವಿ. ಎಂ. ಭಂಡಾರಿಯವರು ಇರುವುದಿಲ್ಲ ಎಂದು ಹೇಳಿರುತ್ತಾರೆ.**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

ಓ.ಹೇ.ಕೇ. ಸರಿ ಇದೆ.

Sd/-

**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾದಂಡಾಧಿಕಾರಿಗಳು, ಹೊನ್ನಾವರ**